**Akashvani : Bangalore**
**National Bulletin In Kannada**
**14.12.2024 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**14.12.2024 / 19.35 hrs**

**<><*<><>*><>**

**ಮುಖ್ಯಾಂಶಗಳು**

**<><*<><>*><>**

**೧. ಸಂವಿಧಾನ ಅಂಗೀಕಾರವಾಗಿ ೭೫ ವರ್ಷ ಪೂರ್ಣ; ಭಾರತ ಪ್ರಜಾಪ್ರಭುತ್ವದ ತಾಯಿ - ಪ್ರಧಾನಿ ನರೇಂದ್ರ ಮೋದಿ**

**೨. ಪ್ರಸ್ತುತ ಕೇಂದ್ರ ಸರ್ಕಾರದ ಆಡಳಿತದಲ್ಲಿ ರಾಜಕೀಯ, ಸಾಮಾಜಿಕ ಮತ್ತು ಆರ್ಥಿಕ ಸಮಾನತೆ ಕುಸಿದಿದೆ - ರಾಹುಲ್ ಗಾಂಧಿ**

**೩. ಒಂದು ರಾಷ್ಟ್ರ, ಒಂದು ಚುನಾವಣೆ ಕುರಿತಂತೆ ಸೋಮವಾರ ಲೋಕಸಭೆಯಲ್ಲಿ ಎರಡು ಮಸೂದೆಗಳ ಮಂಡನೆ**

**೪. ಮೇಲಾಧಾರ ರಹಿತ ಕೃಷಿ ಸಾಲದ ಮಿತಿ ೧.೬ ಲಕ್ಷದಿಂದ ೨ ಲಕ್ಷ ರೂಪಾಯಿಗೆ ಹೆಚ್ಚಳ- ಭಾರತೀಯ ರಿಸರ್ವ್ ಬ್ಯಾಂಕ್ ಘೋಷಣೆ**

**<><*<><>*><>**

ಲೋಕಸಭೆಯಲ್ಲಿ ಇಂದು ಭಾರತದ ಸಂವಿಧಾನದ ೭೫ ವರ್ಷಗಳ ವೈಭವದ ಪಯಣದ ಕುರಿತು ಪ್ರಧಾನಿ ನರೇಂದ್ರ ಮೋದಿ ಭಾಷಣ ಮಾಡಿದರು. ಪ್ರಜಾಪ್ರಭುತ್ವದ ಹಬ್ಬವನ್ನು ಆಚರಿಸಲು ಹೆಮ್ಮೆಪಡುತ್ತೇವೆ. ಭಾರತದ ಗಣತಂತ್ರ ಸಮೃದ್ಧವಾಗಿದ್ದು, ವಿಶ್ವಕ್ಕೆ ಪ್ರೇರಣೆಯಾಗಿದೆ. ಹೀಗಾಗಿ ಭಾರತ ಪ್ರಜಾಪ್ರಭುತ್ವದ ತಾಯಿಯಾಗಿದೆ ಎಂದು ಹೇಳಿದರು. ಡಾ.ಬಿ.ಆರ್.ಅಂಬೇಡ್ಕರ್ ಅವರು, ಏಕತೆಯ ಭಾವನೆಯನ್ನು ಬೆಳೆಸಲು ಸಾಮೂಹಿಕ ನಿರ್ಧಾರ ತೆಗೆದುಕೊಳ್ಳುವ ಮಹತ್ವವನ್ನು ಒತ್ತಿ ಹೇಳಿದರು. ಸಂವಿಧಾನ ಕೋಟ್ಯಾಂತರ ಜನರ ಭಾವನೆ ಹಾಗೂ ಬದುಕಾಗಿದ್ದು, ನಮ್ಮ ದೇಶದಲ್ಲಿ ನಾರಿಶಕ್ತಿಯರಿಗೆ ಮತದಾನದ ಹಕ್ಕು ದೊರಕಿಸಿಕೊಟ್ಟಿದ್ದು ಸಂವಿಧಾನ.  ನಮ್ಮ ದೇಶವು ವಿವಿಧತೆ ಏಕತೆಯನ್ನು ಪ್ರತಿಪಾದಿಸುತ್ತದೆ. ಹೀಗಾಗಿ "ಒಂದು ರಾಷ್ಟ್ರ, ಒಂದು ತೆರಿಗೆ" ಎಂಬ ಧ್ಯೇಯವಾಕ್ಯವನ್ನು ಉತ್ತೇಜಿಸುವ ಆರ್ಥಿಕ ಏಕತೆಯ ಸಾಧನವಾಗಿ ಜಿಎಸ್‌ಟಿಯನ್ನು ಜಾರಿಗೆ ತರಲಾಯಿತು. “ಒಂದು ರಾಷ್ಟ್ರ, ಒಂದು ಗ್ರಿಡ್” ಎಂಬ ಧ್ಯೇಯವು, ದೇಶದ ವಿವಿಧ ಭಾಗಗಳಲ್ಲಿನ ವಿದ್ಯುತ್ ಲಭ್ಯತೆಯ ಅಸಮಾನತೆಯನ್ನು ತೆಗೆದುಹಾಕುವ ಮತ್ತೊಂದು ಉಪಕ್ರಮವಾಗಿದೆ ಎಂದು ತಿಳಿಸಿದರು. ಮಹಿಳೆಯರ ಸಾಧನೆಗಳ ಬಗ್ಗೆ ಪ್ರಸ್ತಾಪಿಸಿದ ಪ್ರಧಾನಿ, ಬಾಹ್ಯಾಕಾಶ ತಂತ್ರಜ್ಞಾನದ ಕ್ಷೇತ್ರದಲ್ಲೂ ಮಹಿಳೆಯರ ಸಾಧನೆಯು ಅಪ್ರತಿಮವಾದದ್ದು ಹಾಗೂ ಎಲ್ಲಾ ಕ್ಷೇತ್ರಗಳಲ್ಲು ಮಹಿಳೆಯರ ಸಾಧನೆಯು ಸ್ಪೂರ್ತಿಧಾಯಕವಾಗಿದೆ. ಪ್ರಸ್ತುತ ಮಹಿಳೆಯೊಬ್ಬರು ದೇಶದ ರಾಷ್ಟ್ರಪತಿಯಾಗಿರುವುದು ಹೆಮ್ಮೆಯ ವಿಚಾರ ಎಂದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

ನಾವು ಭಾರತೀಯರ ಕನಸಿನ ವಿಕಸಿತ ಭಾರತವನ್ನು ನಿರ್ಮಾಣ ಮಾಡಲಿದ್ದೇವೆ. ಶೀಘ್ರದಲ್ಲೇ ವಿಶ್ವದ ೩ ನೇ ಅತಿದೊಡ್ಡ ಆರ್ಥಿಕತೆಯಾಗಲಿದ್ದೇವೆ ಮತ್ತು ಸ್ವಾತಂತ್ರ್ಯದ ೧೦೦ ನೇ ವರ್ಷದ ಹೊತ್ತಿಗೆ ನಾವು ಅಭಿವೃದ್ಧಿ ರಾಷ್ಟ್ರವಾಗಲು ಬದ್ಧರಾಗಿದ್ದೇವೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಇದಕ್ಕೂ ಮುನ್ನ ಚರ್ಚೆಯ ವೇಳೆ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸಂವಿಧಾನ ರಚನೆಯಲ್ಲಿ ಡಾ.ಭೀಮರಾವ್ ಅಂಬೇಡ್ಕರ್ ಅವರ ಕೊಡುಗೆಯನ್ನು ಶ್ಲಾಘಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ಸಾಂವಿಧಾನಿಕ ಮನೋಭಾವಕ್ಕೆ ಅನುಗುಣವಾಗಿ ’ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್ ಮತ್ತು ಸಬಾ ಕಾ ಪ್ರಯಾಸ್’ ಎಂಬ ಪರಿಕಲ್ಪನೆಯೊಂದಿಗೆ ಕೆಲಸ ಮಾಡುತ್ತಿದ್ದಾರೆ. ಸ್ವಾತಂತ್ರ್ಯದ ನಂತರ ದೇಶವು ಎಲ್ಲರಿಗೂ ಸಮಾನ ಹಕ್ಕುಗಳನ್ನು ಖಾತರಿಪಡಿಸಿದೆ ಎಂದು ಹೇಳಿದರು.  ೨೦೧೪ ರಲ್ಲಿ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಈಶಾನ್ಯದಲ್ಲಿನ ಅಭಿವೃದ್ಧಿ ಕಂಡಿಬಂದಿದೆ. ೧೯೪೭ ಮತ್ತು ೨೦೧೪ ರ ನಡುವೆ ಈಶಾನ್ಯದಲ್ಲಿ ಒಂಬತ್ತು ವಿಮಾನ ನಿಲ್ದಾಣಗಳನ್ನು ನಿರ್ಮಿಸಲಾಗಿದೆ, ಆದರೆ ಕಳೆದ ೧೦ ವರ್ಷಗಳಲ್ಲಿ ಈ ಸಂಖ್ಯೆ ೧೭ಕ್ಕೆ ಏರಿಕೆಯಾಗಿದೆ. ೨೦೧೪ರವರೆಗೆ ಸುಮಾರು ೧೧ ಸಾವಿರ ಕಿಲೋಮೀಟರ್ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲಾಗಿದ್ದು, ಕಳೆದ ೧೦ ವರ್ಷಗಳಲ್ಲಿ ೧೬ ಸಾವಿರ ಕಿಲೋಮೀಟರ್ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲಾಗಿದೆ ಎಂದು ಸಚಿವ ಕಿರಣ್ ರಿಜಿಜು ತಿಳಿಸಿದರು. ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಾತನಾಡಿ, ಬಿಜೆಪಿ ಪಕ್ಷವು, ಸಂವಿಧಾನವನ್ನು ದುರ್ಬಲಗೊಳಿಸುತ್ತಿದೆ ಎಂದು ಆರೋಪಿಸಿದರು. ನಿರುದ್ಯೋಗ ಸಮಸ್ಯೆಗಳು, ಅಗ್ನಿವೀರ್ ಯೋಜನೆ ಮತ್ತು ರೈತರು ಮತ್ತು ಮಹಿಳೆಯರ ಮೇಲಿನ

ದೌರ್ಜನ್ಯಗಳ ಬಗ್ಗೆ ಪ್ರಶ್ನಿಸಿದ ಅವರು, ಪ್ರಸ್ತುತ ಆಡಳಿತದಲ್ಲಿ ರಾಜಕೀಯ, ಸಾಮಾಜಿಕ ಮತ್ತು ಆರ್ಥಿಕ ಸಮಾನತೆ ಕುಸಿದಿದೆ ಎಂದು ದೂರಿದರು.  ತಮ್ಮ ಪಕ್ಷ ಅಧಿಕಾರಕ್ಕೆ ಬಂದ ನಂತರ ಜಾತಿ ಗಣತಿ ನಡೆಸಿ ಶೇಕಡ ೫೦ರಷ್ಟು ಮೀಸಲಾತಿಯನ್ನು ರದ್ದುಪಡಿಸುವುದಾಗಿ ಪುನರುಚ್ಚರಿಸಿದರು.

<><*<><>*><>

ನವದೆಹಲಿಯಲ್ಲಿಂದು ನಡೆಯುತ್ತಿರುವ ನಾಲ್ಕನೇ ರಾಷ್ಟ್ರೀಯ ಪ್ರಧಾನ ಕಾಯದರ್ಶಿಗಳ ಸಮಾವೇಶದ ಅಧ್ಯಕ್ಷತೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ವಹಿಸಿದ್ದಾರೆ.  ನಿನ್ನೆ ಆರಂಭವಾಗಿರುವ ಈ ಸಮಾವೇಶವು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವಿನ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಗುರಿಯನ್ನು ಹೊಂದಿದೆ. ಅಲ್ಲದೆ ತ್ವರಿತ ಬೆಳವಣಿಗೆ ಮತ್ತು ಅಭಿವೃದ್ಧಿಯನ್ನು ಸಾಧಿಸಲು ಉತ್ತಮ ಸಮನ್ವಯವನ್ನು ಖಾತ್ರಿಪಡಿಸುವ ಗುರಿಯನ್ನು ಹೊಂದಿದೆ. ಈ ಸಮಾವೇಶದ ಮೊದಲ ಆವೃತ್ತಿಯನ್ನು ೨೦೨೨ ರ ಜೂನ್ ನಲ್ಲಿ ಧರ್ಮಶಾಲಾದಲ್ಲಿ ನಡೆಸಲಾಯಿತು, ನಂತರ ಎರಡನೇ ಆವೃತ್ತಿಯನ್ನು ಜನವರಿ ೨೦೨೩ ರಲ್ಲಿ ಮತ್ತು ಮೂರನೇ ಆವೃತ್ತಿಯನ್ನು ಕಳೆದ ವರ್ಷ ಡಿಸೆಂಬರ್‌ನಲ್ಲಿ ನವದೆಹಲಿಯಲ್ಲಿ ಆಯೋಜಿಸಲಾಗಿತ್ತು. ನಾಲ್ಕನೇ ರಾಷ್ಟ್ರೀಯ ಸಮಾವೇಶದಲ್ಲಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಅನುಸರಿಸಬೇಕಾದ ಕಾರ್ಯತಂತ್ರಗಳನ್ನು ಒಳಗೊಂಡಿರುವ 'ಉದ್ಯಮಶೀಲತೆ, ಉದ್ಯೋಗ ಮತ್ತು ಕೌಶಲ್ಯವನ್ನು ಉತ್ತೇಜಿಸುವುದು - ಜನಸಂಖ್ಯಾ ಲಾಭಾಂಶವನ್ನು ನಿಯಂತ್ರಿಸುವುದು' ಎಂಬ ವಿಷಯದ ಮೇಲೆ ಕೇಂದ್ರೀಕೃತವಾಗಿದೆ. ಈ ವಿಷಯದ ಅಡಿಯಲ್ಲಿ, ಆರು ಕ್ಷೇತ್ರಗಳಾದ ಉತ್ಪಾದನೆ, ಸೇವೆಗಳು, ಗ್ರಾಮೀಣ ಕೃಷಿಯೇತರ, ನಗರ, ನವೀಕರಿಸಬಹುದಾದ ಇಂಧನ ಮತ್ತು ವೃತ್ತಾಕಾರದ ಆರ್ಥಿಕತೆಗೆ ವಿಶೇಷ ಒತ್ತು ನೀಡಲಾಗುವುದು.   ಸಮ್ಮೇಳನದ ಸಮಯದಲ್ಲಿ, ವಿಕಸಿತ ಭಾರತಕ್ಕಾಗಿ ತಂತ್ರಜ್ಞಾನ, ನಗರಗಳನ್ನು ಆರ್ಥಿಕ ಬೆಳವಣಿಗೆಯ ಕೇಂದ್ರಗಳಾಗಿ ಅಭಿವೃದ್ಧಿಪಡಿಸುವುದು, ಹೂಡಿಕೆಗಾಗಿ ರಾಜ್ಯಗಳಲ್ಲಿ ಆರ್ಥಿಕ ಸುಧಾರಣೆಗಳು ಮತ್ತು ಮಿಷನ್ ಕರ್ಮಯೋಗಿ ಮೂಲಕ ಸಾಮರ್ಥ್ಯ ವೃದ್ಧಿ ಕುರಿತು ನಾಲ್ಕು ವಿಶೇಷ ಕಾರ್ಯಕ್ರಮಗಳು ನಡೆಯಲಿವೆ.

<><*<><>*><>

'ಒಂದು ರಾಷ್ಟ್ರ, ಒಂದು ಚುನಾವಣೆ'ಗೆ ಸಂಬಂಧಿಸಿದ ಎರಡು ಮಸೂದೆಗಳನ್ನು ಲೋಕಸಭೆಯಲ್ಲಿ ಸೋಮವಾರ ಮಂಡಿಸಲು ನಿರ್ಧರಿಸಲಾಗಿದೆ. ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಸಂವಿಧಾನದ ೧೨೯ ನೇ ತಿದ್ದುಪಡಿ ಮಸೂದೆ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನು ತಿದ್ದುಪಡಿ ಮಸೂದೆಯನ್ನು ಕೆಳಮನೆಯಲ್ಲಿ ಮಂಡಿಸಲಿದ್ದಾರೆ. ಇತ್ತೀಚೆಗಷ್ಟೇ, ಒಂದು ರಾಷ್ಟ್ರ, ಒಂದು ಚುನಾವಣೆಯ ಕಲ್ಪನೆಯನ್ನು ಅನ್ವೇಷಿಸಲು ರಚಿಸಲಾದ ಉನ್ನತ ಮಟ್ಟದ ಸಮಿತಿಯ ಶಿಫಾರಸುಗಳನ್ನು ಸರ್ಕಾರವು ಅಂಗೀಕರಿಸಿದ್ದು, ಇದರಿಂದಾಗಿ ದೇಶಾದ್ಯಂತ ಏಕಕಾಲದಲ್ಲಿ ಚುನಾವಣೆ ನಡೆಸಲು ಸಾಧ್ಯವಾಗುತ್ತದೆ. ಮಾಜಿ ರಾಷ್ಟ್ರಪತಿ ರಾಮ್ ನಾಥ್ ಕೋವಿಂದ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಉನ್ನತ ಮಟ್ಟದ ಸಮಿತಿಯು, ರಾಜಕೀಯ ಪಕ್ಷಗಳು ಮತ್ತು ತಜ್ಞರು ಜೊತೆ ವ್ಯಾಪಕ ಚರ್ಚೆ ನಡೆಸಿತು. ಸಮಿತಿಯ ಶಿಫಾರಸ್ಸುಗಳನ್ನು ಎರಡು ಹಂತಗಳಲ್ಲಿ ಜಾರಿಗೊಳಿಸಲಾಗುವುದು. ಮೊದಲ ಹಂತದಲ್ಲಿ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಗಳು ಏಕಕಾಲದಲ್ಲಿ ನಡೆಯಲಿದ್ದು, ಸ್ಥಳೀಯ ಸಂಸ್ಥೆಗಳ ಚುನಾವಣೆಗಳಾದ ಪಂಚಾಯತ್ ಮತ್ತು ಪುರಸಭೆಗಳ ಸಾರ್ವತ್ರಿಕ ಚುನಾವಣೆಯು ೧೦೦ ದಿನಗಳಲ್ಲಿ ನಡೆಸಲ್ಪಡುತ್ತವೆ.

<><*<><>*><>

ಮೇಲಾಧಾರ ರಹಿತ ಕೃಷಿ ಸಾಲದ ಮಿತಿಯನ್ನು ೧.೬ ಲಕ್ಷದಿಂದ ೨ ಲಕ್ಷ ರೂಪಾಯಿಗಳಿಗೆ ಹೆಚ್ಚಿಸುವುದಾಗಿ ಭಾರತೀಯ ರಿಸರ್ವ್ ಬ್ಯಾಂಕ್ ಘೋಷಿಸಿದೆ. ಈ ನಿರ್ಧಾರವು ಮುಂದಿನ ವರ್ಷ ಜನವರಿ ೧ ರಿಂದ ಜಾರಿಗೆ ಬರಲಿದ್ದು, ಹಣದುಬ್ಬರದ ಪರಿಣಾಮ ಮತ್ತು ರೈತರ ಮೇಲೆ ಹೆಚ್ಚುತ್ತಿರುವ ಕೃಷಿ ಒಳಹರಿವಿನ ವೆಚ್ಚವನ್ನು ಇದು ಹೆಚ್ಚಿಸಲಿದೆ ಎಂದು ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.  ಈ ಹಿನ್ನಲೆ ತಮ್ಮ ಕಾರ್ಯಾಚರಣೆಯ ಪ್ರದೇಶದ ರೈತರು ಮತ್ತು ಮಧ್ಯಸ್ಥಗಾರರಲ್ಲಿ ಗರಿಷ್ಠ ಪ್ರಚಾರ ಮತ್ತು ಜಾಗೃತಿಯನ್ನು ಒದಗಿಸಲು ಬ್ಯಾಂಕ್‌ಗಳಿಗೆ ಸೂಚನೆ ನೀಡಲಾಗಿದೆ. ಈ ಕ್ರಮವು ರೈತರಿಗೆ ವರ್ಧಿತ ಆರ್ಥಿಕ ಪ್ರವೇಶವನ್ನು ಒದಗಿಸುವ ಜೊತೆಗೆ ಸಾಲದ ಲಭ್ಯತೆಯನ್ನು ಹೆಚ್ಚಿಸುತ್ತದೆ, ವಿಶೇಷವಾಗಿ ಸಣ್ಣ ಮತ್ತು ಕನಿಷ್ಠ ರೈತರಿಗೆ, ಕಡಿಮೆ ಸಾಲದ ವೆಚ್ಚಗಳು ಮತ್ತು ಮೇಲಾಧಾರದ ಅವಶ್ಯಕತೆಗಳನ್ನು ತೆಗೆದುಹಾಕುವುದರಿಂದ ಪ್ರಯೋಜನವಾಗಲಿದೆ. ಈ ಉಪಕ್ರಮವು ಕಿಸಾನ್ ಕ್ರೆಡಿಟ್ ಕಾರ್ಡ್ ಸಾಲದ ಮಿತಿಯನ್ನು ಹೆಚ್ಚಿಸಲಿದ್ದು, ರೈತರಿಗೆ ಕೃಷಿ ಕಾರ್ಯಾಚರಣೆಗಳಲ್ಲಿ ಹೂಡಿಕೆ ಮಾಡಲು ಮತ್ತು ಅವರ ಜೀವನೋಪಾಯವನ್ನು ಸುಧಾರಿಸಲು ಅನುವು ಮಾಡಿಕೊಡುತ್ತದೆ.

<><*<><>*><>

ಭಾರತದ ಪ್ರಜಾಪ್ರಭುತ್ವವು ಅಭಿವ್ಯಕ್ತಿ ಮತ್ತು ಸಂಭಾಷಣೆಯ ಸಮತೋಲನದ ಮೇಲೆ ಕೇಂದ್ರೀಕೃತವಾಗಿರಬೇಕು ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಭಾರತೀಯ ಅಂಚೆ ಮತ್ತು ದೂರಸಂಪರ್ಕ ಖಾತೆಗಳು ಮತ್ತು ಹಣಕಾಸು ಸೇವೆಯ ೫೦ನೇ ಸಂಸ್ಥಾಪನಾ ದಿನದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವವು ಕೇವಲ ವ್ಯವಸ್ಥೆಗಳ ಮೇಲೆ ಅಲ್ಲ ಆದರೆ ಮೂಲಭೂತ ಮೌಲ್ಯಗಳಿಂದ ಅಭಿವೃದ್ಧಿ ಹೊಂದುತ್ತದೆ ಎಂದು

ಹೇಳಿದ್ದಾರೆ. ಇಂದಿನ ಸಾಂಸ್ಥಿಕ ಸವಾಲುಗಳು ಒಳಗಿನಿಂದ ಮತ್ತು ಹೊರಗಿನಿಂದ ಹೆಚ್ಚಾಗಿ ಅರ್ಥಪೂರ್ಣ ಸಂಭಾಷಣೆ ಮತ್ತು ಅಧಿಕೃತ ಅಭಿವ್ಯಕ್ತಿತ್ವವನ್ನು ವ್ಯಕ್ತಪಡಿಸುತ್ತದೆ. ಅಭಿವ್ಯಕ್ತಿ ಮತ್ತು ಸಂವಾದಗಳು ಒಂದಕ್ಕೊಂದು ಪೂರಕವಾಗಿದ್ದು, ಇವೆರಡರ ನಡುವಿನ ಸಾಮರಸ್ಯವು ಯಶಸ್ಸಿನ ಕೀಲಿಯಾಗಿದೆ ಎಂದರು. ಯುವಜನತೆ ತಾಂತ್ರಿಕ ಪರಿಣತರಾಗುವ ಅಗತ್ಯವಿದ್ದು, ಸ್ವಯಂ ಆತ್ಮಾವಲೋಕನ ಮಾಡುಕೊಳ್ಳುವ ಅಗತ್ಯವಿದೆ. ಸಾಂಪ್ರದಾಯಿಕ ಆಡಳಿತಾತ್ಮಕ ಗಡಿಗಳನ್ನು ಮೀರಿ ಬೆಳೆಯಬೇಕು ಎಂದು ಅವರು ಈ ಸಂದರ್ಭದಲ್ಲಿ ಹೇಳಿದ್ದಾರೆ. ಇನ್ನು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಮಾತನಾಡಿ, ಕಳೆದ ಐದು ದಶಕಗಳಲ್ಲಿ ಭಾರತೀಯ ಅಂಚೆ ಮತ್ತು ದೂರಸಂಪರ್ಕ ಖಾತೆಗಳು ಹಾಗೂ ಹಣಕಾಸು ಸೇವೆಗಳ ಮಹತ್ವದ ಕಾರ್ಯಗಳನ್ನು ಶ್ಲಾಘಿಸಿದರು. ಎರಡೂ ಇಲಾಖೆಗಳು ಭಾರತದ ಕನಸನ್ನು ಸಾಕಾರಗೊಳಿಸುತ್ತಿವೆ. ಭಾರತವು ವಿಶ್ವ ಶಕ್ತಿಯಾಗಲು ಮತ್ತು ಜಗತ್ತನ್ನು ಮುನ್ನಡೆಸುವ ಹಾದಿಯಲ್ಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

**<><*<><>*><>**

ಭೂಕುಸಿತಕ್ಕೆ ತುತ್ತಾದ ಕೇರಳದ ವಯನಾಡಿಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕೆಂದು ವಯನಾಡಿನ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಇಂದು ಸಂಸತ್ತಿನ ಹೊರಗೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ಪ್ರಕೃತಿ ವಿಕೋಪದಿಂದ ಸಂತ್ರಸ್ತರಾದ ಜನರ ಬಗ್ಗೆ ಸರ್ಕಾರ ಗಮನ ಹರಿಸಬೇಕು. ಅವರಿಗೆ ಅಗತ್ಯ ನೆರವನ್ನು ನೀಡಬೇಕು. ಭೂಕುಸಿತದಿಂದ ಎರಡು ಸಾವಿರ ಕೋಟಿ ರೂಪಾಯಿ ಮೌಲ್ಯದ ಆಸ್ತಿ ನಷ್ಟವಾಗಿದೆ. ಸರ್ಕಾರ ನಿಗದಿಪಡಿಸಿದ ನಿಯಮಗಳ ಪ್ರಕಾರ ತ್ವರಿತಗತಿಯಲ್ಲಿ ಹಣವನ್ನು ಬಿಡುಗಡೆ ಮಾಡಬೇಕು. ಸಂಕಷ್ಟದಿಂದ ಬಳಲುತ್ತಿರುವ ವಯನಾಡಿನ ಜನರು ಈ ಪ್ಯಾಕೇಜ್‌ಗೆ ಅರ್ಹರು" ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಕೇರಳದ ಕಾಂಗ್ರೆಸ್ ಸಂಸದರು ಕೂಡ ವಿಶೇಷ ಪ್ಯಾಕೇಜ್‌ಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು.

**<><*<><>*><>**

ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕೆ ನಾಳೆಯಿಂದ ಮೂರು ದಿನಗಳ ಭಾರತ ಪ್ರವಾಸ ಕೈಗೊಳ್ಳಲಿದ್ದಾರೆ. ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಶ್ರೀಲಂಕಾದ ಅಧ್ಯಕ್ಷರಾಗಿ ಆಯ್ಕೆಯಾದ ನಂತರ ದಿಸ್ಸಾನಾಯಕೆ ಅವರ ಮೊದಲ ಭೇಟಿ ಇದಾಗಿದೆ ಎಂದು ಹೇಳಿದರು. ತಮ್ಮ ಮೂರು ದಿನಗಳ ಭೇಟಿಯ ಸಮಯದಲ್ಲಿ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಪರಸ್ಪರ ಹಿತಾಸಕ್ತಿಯ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ ಎಂದರು. ಶ್ರೀಲಂಕಾದ ಅಧ್ಯಕ್ಷರು ರಾಷ್ಟ್ರ ರಾಜಧಾನಿಯಲ್ಲಿ ವ್ಯಾಪಾರ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದು, ಬಳಿಕ ಬಿಹಾರದ ಬೋಧಗಯಾಕ್ಕೆ ಭೇಟಿ ನೀಡಲಿದ್ದಾರೆ. ಈ ಭೇಟಿಯು ಉಭಯ ದೇಶಗಳ ನಡುವಿನ ಪರಸ್ಪರ ಬಹುಮುಖಿ ಸಹಕಾರವನ್ನು ಬಲಪಡಿಸುತ್ತದೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಪಶ್ಚಿಮ ಏಷ್ಯಾದಲ್ಲಿರುವ ಭಾರತೀಯರ ವಾಪಸಾತಿ ಕುರಿತು ಮಾತನಾಡಿದ ಅವರು, ಭಾರತಕ್ಕೆ ಮರಳಲು ಇಚ್ಛಿಸಿದ ೭೭ ಭಾರತೀಯರನ್ನು ಸಿರಿಯಾದಿಂದ ಸ್ಥಳಾಂತರಿಸಲಾಗಿದೆ. ಲೆಬನಾನ್ ಮತ್ತು ಸಿರಿಯಾದಲ್ಲಿನ ರಾಯಭಾರ ಕಚೇರಿಗಳಿಂದ ನಿಕಟ ಸಮನ್ವಯದೊಂದಿಗೆ ಈ ೭೭ ಭಾರತೀಯರನ್ನು ಲೆಬನಾನ್ ಮೂಲಕ ಸ್ಥಳಾಂತರಿಸಲಾಗಿದೆ ಎಂದರು.

ಕೆನಡಾದಲ್ಲಿ ಮೂವರು ಭಾರತೀಯ ವಿದ್ಯಾರ್ಥಿಗಳ ಸಾವಿನ ವಿಷಯದ ಕುರಿತು ಮಾತನಾಡಿದ ಅವರು, ಕೆನಡಾದ ಅಧಿಕಾರಿಗಳೆದುರು ಈ ವಿಷಯಕ್ಕೆ ಸಂಬಂಧಿಸಿದಂತೆ ಪ್ರಸ್ತಾಪಿಸಲಾಗಿದೆ ಎಂದು ಹೇಳಿದ್ದಾರೆ. ಘಟನೆಗಳ ಸಂಪೂರ್ಣ ತನಿಖೆಗಾಗಿ ಕೆನಡಾದಲ್ಲಿರುವ ಭಾರತೀಯ ರಾಯಭಾರ ಕಚೇರಿ ಸ್ಥಳೀಯ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ. ಕೆನಡಾದಲ್ಲಿ ಭಾರತೀಯ ಪ್ರಜೆಗಳ ಸುರಕ್ಷತೆ, ಭದ್ರತೆ ಮತ್ತು ಕಲ್ಯಾಣ ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ ಎಂದು ಅವರು ಹೇಳಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**